**Akashvani: Bangalore**
**Regional News In Kannada**
**23.10.2025 : 1430hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.10.2025 : 1430hrs**
***********

**ಮುಖ್ಯಾಂಶಗಳು**

1. ಮೈಸೂರಿನಲ್ಲಿ ಆರೋಗ್ಯಾಧಿಕಾರಿಗಳ ರಹಸ್ಯ ಕಾರ್ಯಾಚರಣೆ; ಹೆಣ್ಣು ಭ್ರೂಣಹತ್ಯೆ ಜಾಲ ಪತ್ತೆ; ೭ ಮಂದಿ ವಿರುದ್ಧ ಪ್ರಕರಣ ದಾಖಲು
2. ಇಂದಿನಿಂದ ಐತಿಹಾಸಿಕ ಕಿತ್ತೂರು ಉತ್ಸವ; ಚೆನ್ನಮ್ಮ ಸಮಾಧಿಯನ್ನು ರಾಷ್ಟ್ರೀಯ ಸ್ಮಾರಕವೆಂದು ಘೋಷಿಸುವಂತೆ ಕೇಂದ್ರ ಸಚಿವ ಸೋಮಣ್ಣ ಒತ್ತಾಯ
3. ಮುಖ್ಯಮಂತ್ರಿ ಉತ್ತರಾಧಿಕಾರಿ ವಿಚಾರ; ಹೈಕಮಾಂಡ್ ತೀರ್ಮಾನವೇ ಅಂತಿಮ - ಸಚಿವ ಸತೀಶ್ ಜಾರಕಿಹೊಳಿ
4. ಕಾವೇರಿ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆ; ಹಾರಂಗಿ ಜಲಾಶಯ ಭರ್ತಿ
5. ಹಾಸನಾಂಬೆ ದರ್ಶನಕ್ಕೆ ವಿಧ್ಯುಕ್ತ ತೆರೆ; ಪೂಜಾ ವಿಧಿ ವಿಧಾನಗಳೊಂದಿಗೆ ಗರ್ಭಗುಡಿ ಬಾಗಿಲು ಮುಚ್ಚಿದ ಅರ್ಚಕರು

********

ಮೈಸೂರಿನಲ್ಲಿ ಭ್ರೂಣಹತ್ಯೆ ಜಾಲ ಪತ್ತೆಯಾಗಿದೆ. ಬನ್ನೂರು ಹೈವೇ ಬಳಿಯ ಹುಣಗನಹಳ್ಳಿಯ ಐಷಾರಾಮಿ ಫಾರಂ ಹೌಸ್‌ನಲ್ಲಿ ಲಿಂಗ ಭ್ರೂಣ ಪತ್ತೆ ಕಾರ್ಯ ನಡೆಯುತ್ತಿರುವುದನ್ನು ಆರೋಗ್ಯ ಇಲಾಖೆ ಅಧಿಕಾರಿಗಳು ರಹಸ್ಯ ಕಾರ್ಯಾಚರಣೆ ಮೂಲಕ ಪತ್ತೆಹಚ್ಚಿ, ಭ್ರೂಣ ಹಂತಕರನ್ನು ಸೆರೆಹಿಡಿದಿದ್ದಾರೆ. ಓರ್ವ ಮಹಿಳೆ ಸೇರಿ ೭ ಮಂದಿಯ ವಿರುದ್ಧ ಪ್ರಕರಣ ದಾಖಲಾಗಿದೆ. ಗರ್ಭಿಣಿ ಮಹಿಳೆಯ ಸಹಾಯ ಪಡೆದು ಲಿಂಗ ಭ್ರೂಣ ಪತ್ತೆ ಕಾರ್ಯಚಟುವಟಿಕೆ ನಡೆಸುತ್ತಿರುವುದನ್ನು ಪತ್ತೆ ಮಾಡಲಾಗಿದೆ. ಕಾರ್ಯಾಚರಣೆ ವೇಳೆ ನಾಲ್ವರು ಗರ್ಭಿಣಿ ಸ್ತ್ರೀಯರು ಲಿಂಗ ಭ್ರೂಣ ಪತ್ತೆ ಮಾಡಿಸಿಕೊಳ್ಳಲು ಹಾಜರಿರುವುದು ಹಾಗೂ ಸ್ಕ್ಯಾನಿಂಗ್ ಬಳಕೆ ಮಾಡುವ ಉಪಕರಣವು ಕಂಡು ಬಂದಿದೆ. ಹೆರಿಗೆ ಪೂರ್ವ ಭ್ರೂಣ ಲಿಂಗಪತ್ತೆ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಈ ಕುರಿತಂತೆ ಮಾಹಿತಿ ನೀಡಿರುವ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಕುಮಾರಸ್ವಾಮಿ, ದಾಳಿಯ ವೇಳೆ ಕೆಲವು ವೈದ್ಯಕೀಯ ಸಾಧನಗಳು ಹಾಗೂ ಔಷಧಿಗಳು ದೊರೆತಿದ್ದು, ಅವುಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದ್ದಾರೆ. ಪ್ರತಿಯೊಂದು ಸ್ಕ್ಯಾನಿಂಗ್‌ಗೆ ೧೫ ಸಾವಿರ ರೂಪಾಯಿಯಿಂದ ೩೦ ಸಾವಿರ ರೂಪಾಯಿವರೆಗೆ ಹಣ ವಸೂಲಿ ಮಾಡಲಾಗುತ್ತಿತ್ತು. ಇದು

ಸಂಪೂರ್ಣ ಕಾನೂನುಬಾಹಿರ ಕೃತ್ಯವಾಗಿದ್ದು, ಬನ್ನೂರಿನ ಎಸ್.ಕೆ. ಆಸ್ಪತ್ರೆಯ ದಾದಿಯೊಬ್ಬರನ್ನು ಬಂಧಿಸಲಾಗಿದೆ ಎಂದು ಡಾ. ಕುಮಾರಸ್ವಾಮಿ ಮಾಹಿತಿ ನೀಡಿದ್ದಾರೆ.

****ಧ್ವನಿ**** ಡಾ. ಕುಮಾರಸ್ವಾಮಿ

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತಂತೆ ಪೋಸ್ಟ್ ಮಾಡಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಹೆಣ್ಣು ಭ್ರೂಣ ಹತ್ಯೆ ವಿರುದ್ಧ ಆರೋಗ್ಯ ಇಲಾಖೆ ನಿರಂತರ ಹೋರಾಟ ನಡೆಸುತ್ತಿದೆ. ಹೆಣ್ಣು ಭ್ರೂಣ ಹತ್ಯೆ ಒಂದು ಸಾಮಾಜಿಕ ಪಿಡುಗು ಎಂದು ತಿಳಿಸಿದ್ದಾರೆ.  ಹೆಣ್ಣು ಭ್ರೂಣ ಹಂತಕರನ್ನು ಮಟ್ಟಹಾಕಲು ಸರ್ಕಾರ ಕಠಿಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

********

ನವದೆಹಲಿಯ ಸಂಸತ್ ಭವನದ ಪ್ರೇರಣಾ ಸ್ಥಳದಲ್ಲಿ ವೀರ ವನಿತೆ ಕಿತ್ತೂರು ರಾಣಿ ಚೆನ್ನಮ್ಮನ ೨೪೭ನೇ ಜಯಂತ್ಯೋತ್ಸವ ಮತ್ತು ೨೦೦ನೇ ವಿಜಯೋತ್ಸವ ಆಚರಿಸಲಾಯಿತು.  ಈ ವೇಳೆ ಮಾತನಾಡಿದ ಕೇಂದ್ರ ಸಚಿವ ವಿ. ಸೋಮಣ್ಣ, ಚೆನ್ನಮ್ಮ ಸಾಧನೆ ಮತ್ತು ಕಿತ್ತೂರಿನ ಇತಿಹಾಸವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯ ನಡೆಯಬೇಕು. ಕಿತ್ತೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚಿನ ಅಧಿಕಾರ ನೀಡಿ, ಕಿತ್ತೂರು ಸಂಸ್ಥಾನದ ಕೋಟೆ, ಕೊತ್ತಲಗಳಲ್ಲಿ ಸಮರ್ಪಕ ನಿರ್ವಹಣೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಸಂಸದ ಜಗದೀಶ್ ಶೆಟ್ಟರ್, ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಸೇರಿದಂತೆ ರಾಜ್ಯದ ಸ್ವಾಮೀಜಿಗಳು ಉಪಸ್ಥಿತರಿದ್ದರು. ಬ್ರಿಟಿಷ್‌ರ ವಿರುದ್ಧ ಮೊಟ್ಟಮೊದಲ ಸ್ವಾತಂತ್ರ್ಯ ಕಹಳೆಯೂದಿ ೧೮೨೪ರಲ್ಲಿ  ಬ್ರಿಟಿಷ್ ಅಧಿಕಾರಿ ಥ್ಯಾಕರೆಯನ್ನು ಹೊಡೆದುರುಳಿಸಿ ಗೆಲುವು ಸಾಧಿಸಿದ ಐತಿಹಾಸಿಕ ಘಟನೆಯ ಸ್ಮರಣಾರ್ಥ ಕಿತ್ತೂರಿನಲ್ಲಿ ಇಂದು ಕಿತ್ತೂರು ಉತ್ಸವಕ್ಕೆ ಸಡಗರ ಸಂಭ್ರಮದಿಂದ ಚಾಲನೆ ನೀಡಲಾಯಿತು. ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ವಿಜಯ ಜ್ಯೋತಿಯನ್ನು ಬರಮಾಡಿಕೊಂಡು ಸಂಸ್ಥಾನದ ಧ್ವಜಾರೋಹಣ ನೆರವೇರಿಸಿದರು.  ಜಾನಪದ ಕಲಾ ಮೇಳದ ಭವ್ಯ ಮೆರವಣಿಗೆಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಚಾಲನೆ ನೀಡಿದರು. ಜಿಲ್ಲಾಧಿಕಾರಿ ಮೊಹಮ್ಮದ್ ರೋಷಣ್ ಉತ್ಸವದ ಧ್ವಜಾರೋಹಣ ನೆರವೇರಿಸಿದರು. ರಾಣಿ ಚನ್ನಮ್ಮನ ತವರೂರು ಬೆಳಗಾವಿ ಹೊರವಲಯದ ಕಾಕತಿ ಗ್ರಾಮದಲ್ಲಿ ಉತ್ಸವದ ನಿಮಿತ್ತ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ  ರಾಣಿ ಚೆನ್ನಮ್ಮನ ಮೂರ್ತಿಗೆ ಪೂಜೆ ಸಲ್ಲಿಸಿದರು.    ಈ ವೇಳೆ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ಮೂಲಕ ಕಿತ್ತೂರಿನ ಮಾದರಿಯಲ್ಲಿ ಕಾಕತಿಯಲ್ಲಿ ವಿಜೃಂಭಣೆಯಿಂದ ಉತ್ಸವ ಮಾಡಲಾಗುವುದು ಎಂದು ತಿಳಿಸಿದರು.ಬಳ್ಳಾರಿ ಜಿಲ್ಲಾಡಳಿತದಿಂದ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮ ನಡೆಯಿತು.ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡ್ರಿಗಿ ನಾಗರಾಜ ಮಾತನಾಡಿ, ಬ್ರಿಟಿಷರ ಪಾಲಿಗೆ ಸಿಂಹಸ್ವಪ್ನವಾಗಿ ಕಾಡಿದ್ದ ರಾಣಿ ಚೆನ್ನಮ್ಮರ ಧೈರ್ಯ ಇಂದಿನ ವಿಧ್ಯಾರ್ಥಿನಿಯರಿಗೆ,

ಮಹಿಳೆಯರಿಗೆ ಮಾದರಿಯಾಗಲಿ ಎಂದು ತಿಳಿಸಿದರು. ವೀರವನಿತೆ, ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಇಂದು ಆಚರಿಸಲಾಯಿತು.

********

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಉತ್ತರಾಧಿಕಾರಿ ನೇಮಕ ಕುರಿತಂತೆ ಹೈಕಮಾಂಡ್ ಅಂತಿಮ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಲೋಕೋಪಯೋಗಿ ಸಚಿವ ಜಾರಕಿಹೊಳಿ ಬೆಳಗಾವಿಯಲ್ಲಿ ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ತರಾಧಿಕಾರಿ ಸತೀಶ್ ಜಾರಕಿಹೊಳಿ ಎಂದು ಕಾಂಗ್ರೆಸ್ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ನೀಡಿದ ಹೇಳಿಕೆ ಕುರಿತಂತೆ ಬೆಳಗಾವಿಯಲ್ಲಿ ಪ್ರತಿಕ್ರಿಯಿಸಿದ ಅವರು, ೨೦೨೮ರಲ್ಲಿ ಮುಖ್ಯಮಂತ್ರಿ ಹುದ್ದೆಗೆ ಹಕ್ಕು ಮಂಡಿಸುತ್ತೇನೆ. ಆದರೆ ಈ ಬಗ್ಗೆ ಈಗ ಚರ್ಚೆಯ ಅಗತ್ಯವಿಲ್ಲ ಎಂದು ಹೇಳಿದ್ದಾರೆ. ೩೦ ತಿಂಗಳ ಬಳಿಕ ಅದು ಪಕ್ಷ, ಶಾಸಕರು ಮತ್ತು ರಾಜ್ಯದ ರಾಜಕೀಯ ಮನಸ್ಥಿತಿಯನ್ನು ಅವಲಂಬಿಸಿರುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

********

ಮಡಿಕೇರಿ ನಗರ ಸೇರಿದಂತೆ ಕೊಡಗಿನ ಎಲ್ಲೆಡೆ ಭಾರೀ ಮಳೆ ಆಗುತ್ತಿದೆ. ಕೊಡಗು ಜಿಲ್ಲೆಯ ನದಿ ಪಾತ್ರದಲ್ಲಿ ಭಾರೀ ಮಳೆಯಿಂದಾಗಿ ಅಕ್ಟೋಬರ್ ತಿಂಗಳಲ್ಲೂ ಹಾರಂಗಿ ಜಲಾಶಯ ಮತ್ತೆ ಭರ್ತಿಯಾಗಿದೆ. ಹಾರಂಗಿ ಜಲಾಶಯಕ್ಕೆ ೮ ಸಾವಿರದ ೨೦೦ ಕ್ಯೂಸೆಕ್ ಒಳ ಹರಿವು ಇದ್ದು, ಜಲಾಶಯದಿಂದ ೫ ಸಾವಿರ ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ. ಇತಿಹಾಸದಲ್ಲಿಯೇ ಮೊದಲ ಬಾರಿಗೆ ಅಕ್ಟೋಬರ್‌ನಲ್ಲಿ ಹಾರಂಗಿ ಜಲಾಶಯ ಭರ್ತಿಯಾಗಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ನದಿಗೆ ಹೆಚ್ಚುವರಿ ನೀರು ಬಿಡುಗಡೆ ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆಯಾಗುತ್ತಿರುವುದರಿಂದ ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಜಲಾಶಯಕ್ಕೆ ಹೆಚ್ಚಿನ ನೀರು ಹರಿದು ಬರುತ್ತಿದೆ. ಜಲಾಶಯದಿಂದ ನದಿಗೆ ಸುಮಾರು ೨೫ ಸಾವಿರದಿಂದ ೪೦ ಸಾವಿರ ಕ್ಯೂಸೆಕ್ ನೀರನ್ನು ಹರಿಬಿಡಲಾಗುತ್ತಿದೆ. ನದಿಗೆ ಬಿಡುತ್ತಿರುವ ನೀರಿನ ಪ್ರಮಾಣವು ಮತ್ತಷ್ಟು ಹೆಚ್ಚಳವಾಗುವ ಸಾಧ್ಯತೆ ಇದ್ದು, ಕಾವೇರಿ ನದಿ ತಗ್ಗು ಪ್ರದೇಶದಲ್ಲಿರುವ ಮತ್ತು ನದಿಯ ಎರಡೂ ದಂಡೆಗಳಲ್ಲಿರುವ ಸಾರ್ವಜನಿಕರು ತಮ್ಮ ಆಸ್ತಿ ಪಾಸ್ತಿ ಹಾಗೂ ಜಾನುವಾರು ರಕ್ಷಣೆಗೆ ಎಚ್ಚರಿಕೆ ವಹಿಸಿ, ಸೂಕ್ತ ಮುಂಜಾಗೃತಾ ಕ್ರಮ ವಹಿಸುವಂತೆ ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಮಧ್ಯಾಹ್ನ ೧೨ ಗಂಟೆಗೆ ಸರಿಯಾಗಿ ಹಾಸನಾಂಬ ದೇವಾಲಯದ ಗರ್ಭಗುಡಿ ಬಾಗಿಲು ಮುಚ್ಚಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಹಾಗೂ ಅರ್ಚಕರ ಸಮ್ಮುಖದಲ್ಲಿ ಪೂಜಾ ವಿಧಿ ವಿಧಾನಗಳಿಂದ ದೇಗುಲದಲ್ಲಿ ದೀಪವಿಟ್ಟು ಗರ್ಭಗುಡಿ ಬಾಗಿಲು ಮುಚ್ಚಲಾಗಿದೆ. ಇದಕ್ಕೂ ಮೊದಲು ಹಾಸನಾಂಬ ದರ್ಶನ ಹಾಗೂ

ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂತಿಮ ದಿನವಾದ ಇಂದು ಪ್ರತೀ ವರ್ಷದಂತೆ ಇಂದು ಮುಂಜಾನೆ ಸಿದ್ದೇಶ್ವರ ಸ್ವಾಮಿ ರಥೋತ್ಸವ ಹಾಗೂ ಕೆಂಡೋತ್ಸವ ಜರುಗಿತು.ಈ ಬಾರಿ ೧೩ ದಿನಗಳ  ಹಾಸನಾಂಬೆ ದೇವಿ ದರ್ಶನದಲ್ಲಿ ಒಟ್ಟು ೨೬ ಲಕ್ಷ ಮಂದಿ ದೇವಿಯ ದರ್ಶನ ಪಡೆದಿದ್ದಾರೆ, ಈ ಬಾರಿ ದರ್ಶನ ಟಿಕೆಟ್ ಮೂಲಕವೇ ಹಾಸನಾಂಬೆ ದೇವಾಲಯಕ್ಕೆ ೨೨ ಕೋಟಿ ರೂಪಾಯಿ ಆದಾಯ ಬಂದಿದೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ.

********

ಬೆಂಗಳೂರಿನಲ್ಲಿ ದೀಪಾವಳಿ ಸಮಯದಲ್ಲಿ ಪಟಾಕಿಗಳಿಗೆ ಸಂಬಂಧಿಸಿದ ಕಣ್ಣಿನ ಗಾಯಗಳ ಪ್ರಕರಣಗಳ ಸಂಖ್ಯೆ ಏರಿಕೆಯಾಗಿದೆ. ಸುಮಾರು ೨೫೦ಕ್ಕೂ ಹೆಚ್ಚು ಜನರ ಕಣ್ಣಿಗೆ ಹಾನಿ ಉಂಟಾಗಿದ್ದು, ಮಿಂಟೋ, ನಾರಾಯಣ ನೇತ್ರಾಲಯ ಸೇರಿದಂತೆ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಕೆಲವರು ಶಾಶ್ವತವಾಗಿ ದೃಷ್ಟಿಯನ್ನು ಕಳೆದುಕೊಂಡಿದ್ದಾರೆ. ಒಟ್ಟು ಪ್ರಕರಣಗಳಲ್ಲಿ ಶೇಕಡ ೬೦ಕ್ಕಿಂತ ಹೆಚ್ಚುಮಕ್ಕಳು ಒಳಗೊಂಡಿರುವುದರ ಬಗ್ಗೆ ನಾರಾಯಣ ನೇತ್ರಾಲಯ ಕಳವಳ ವ್ಯಕ್ತಪಡಿಸಿದೆ. ಅಕ್ಟೋಬರ್ ೧೯ ರಿಂದ ೯೦ ರೋಗಿಗಳು ಚಿಕಿತ್ಸೆ ಪಡೆದಿದ್ದು, ಇವರಲ್ಲಿ ೪೬ ಮಕ್ಕಳು ಸೇರಿದ್ದಾರೆ. ಮಿಂಟೋ ಆಸ್ಪತ್ರೆಯಲ್ಲಿ ೩೭, ಶಂಕರ ಕಣ್ಣಿನ ಆಸ್ಪತ್ರೆಯಲ್ಲಿ ೩೫ ಸೇರಿದಂತೆ ವಿವಿಧ ಆಸ್ಪತ್ರೆಗಳಲ್ಲಿ ಹಲವು ಪ್ರಕರಣಗಳು ದಾಖಲಾಗಿವೆ.

********

ಲಾಲ್‌ಬಾಗ್‌ನಲ್ಲಿ ಪ್ರಸ್ತಾವಿತ ಸುರಂಗ ರಸ್ತೆ ನಿರ್ಮಾಣ ಯೋಜನೆಗೆ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ನಗರ ಅಭಿವೃದ್ಧಿ ಇಲಾಖೆಯ ತಜ್ಞರ ಸಮಿತಿಯೇ ಯೋಜನೆಯ ಡಿಪಿಆರ್ ಸರಿಯಿಲ್ಲ ಎಂದು ಹೇಳಿರುವುದನ್ನು ಉಲ್ಲೇಖಿಸಿದ್ದಾರೆ.

********

ನವಿ ಮುಂಬೈನಲ್ಲಿ ಡಾ. ಡಿ.ವೈ.ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಇಂದು ನಡೆಯಲಿರುವ ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ವನಿತೆಯರ ತಂಡ, ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಸತತ ಸೋಲುಗಳಿಂದ ಕಂಗೆಟ್ಟಿರುವ ಭಾರತ ತಂಡಕ್ಕೆ ಸೆಮಿಫೈನಲ್ ಪ್ರವೇಶಿಸಲು ಇದು ಮಾಡು ಇಲ್ಲವೆ, ಮಡಿ ಪಂದ್ಯವಾಗಿದೆ.

****END****